34

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ವ್ಹಿ.ಸಂಕನೂರ, ಅವರಿಂದ ನಿಯಮ 72ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ**

**ಸೂಚನಾ ಪತ್ರದ ವಿಷಯ**

ರಾಜ್ಯ ಸರ್ಕಾರಿ ನೌಕರರಿಗೆ ಏಳನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು 19 ತಿಂಗಳಿಂದ ವಿಳಂಬವಾಗಿ ರಾಜ್ಯದ ಸುಮಾರು 13 ಲಕ್ಷ ನೌಕರರಿಗೆ/ಕುಟುಂಬದವರಿಗೆ ಅನ್ಯಾಯವಾಗಿರುವುದು. ಆದ್ದರಿಂದ, ಆಯೋಗದ ಶಿಫಾರಸ್ಸುಗಳನ್ನು ಕೂಡಲೇ ಜಾರಿ ಮಾಡುವ ಬಗ್ಗೆ ಸದನದಲ್ಲಿ ಪ್ರಸ್ತಾಪಿತ ಬಯಸುತ್ತೇನೆ.

**ಸರ್ಕಾರದ ಉತ್ತರ**

ರಾಜ್ಯ ಸರ್ಕಾರಿ ನೌಕರರ ವೇತನ, ಭತ್ಯೆಗಳು ಮತ್ತು ಪಿಂಚಣಿ ಪರಿಷ್ಕರಣೆ ಕುರಿತಂತೆ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಲು ದಿನಾಂಕ 19-11-2022ರ ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್.ಆರ್.ಪಿ 2022ರಲ್ಲಿ ತ್ರಿಸದಸ್ಯರ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಆದೇಶಿಸಲಾಗಿರುತ್ತದೆ.

ನೌಕರರ ವೇತನ, ಭತ್ಯೆ ಮತ್ತು ಪಿಂಚಣಿ ಪರಿಷ್ಕರಣೆಯ ವಿಷಯವು ಸರ್ಕಾರದ ನೀತಿ ನಿರ್ಣಯಕ್ಕೆ ಸಂಬಂಧಿಸಿರುತ್ತದೆ. ಅದರಂತೆ, ರಾಜ್ಯ ಸರ್ಕಾರಿ ನೌಕರರ ವೇತನ, ಭತ್ಯೆಗಳು ಮತ್ತು ಪಿಂಚಣಿ ಪರಿಷ್ಕರಣೆ ಕುರಿತಂತೆ 7ನೇ ರಾಜ್ಯ ವೇತನ ಆಯೋಗವು ಸರ್ಕಾರಕ್ಕೆ ಸಲ್ಲಿಸಿದ ವರದಿಯಲ್ಲಿನ ಶಿಫಾರಸ್ಸುಗಳನ್ನು ಸರ್ಕಾರವು ಪರಿಶೀಲಿಸಿರುತ್ತದೆ.

7ನೇ ರಾಜ್ಯ ವೇತನ ಆಯೋಗದ ಶಿಫಾಸ್ಸಿನಂತೆ, ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರುಗಳನ್ನೂ ಒಳಗೊಂಡಂತೆ, ರಾಜ್ಯ ಸರ್ಕಾರಿ ನೌಕರರ ವೇತನ, ವೇತನ ಸಂಬಂಧಿತ ಭತ್ಯೆಗಳನ್ನು ದಿನಾಂಕ: 01.07.2022ರಿಂದ ಅನ್ವಯವಾಗುವಂತೆ ಪರಿಷ್ಕರಿಸಿ, ದಿನಾಂಕ: 01.08.2024ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲು ದಿನಾಂಕ: 15.07.2024ರ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ.

**ಸಂ: ಆಇ 31 ಎಸ್‌ಆರ್‌ಪಿ 2024**

(ಸಿದ್ದರಾಮಯ್ಯ)
ಮುಖ್ಯಮಂತ್ರಿ